# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಬೇಗೂರು ಉಪವಿಭಾಗ, ದೇವರಚಿಕ್ಕನಹಳ್ಳಿ ಮುಖ್ಯರಸ್ತೆ, ಬೇಗೂರು, ಬೆಂಗಳೂರು-560114

ದಿನಾಂಕ: 06.02.2022

## ಸಭೆ ತಿಳುವಳಿಕೆ ಪತ್ರ

**ವಿಷಯ: ದಿನಾಂಕ:09.02.2022 ರಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಿರುವ ಬಗ್ಗೆ.**

**ಉಲ್ಲೇಖ: ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ. ರವರ ಕಛೇರಿ ಆದೇಶದ ಪತ್ರ ಸಂಖ್ಯೆ:ಬಿ12(5)/ಪಿ.ಆರ್/35/2020-21, ದಿನಾಂಕ:21.09.2020**

*-*-*-*-*-*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೇಗೂರು ವಾರ್ಡ್ ಸಂಖ್ಯೆ:192 ರ ವಾರ್ಡ್ ಸಮಿತಿಯ ಸಭೆಯನ್ನು ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಫಾಲಕ ಅಭಿಯಂತರರು, ಉತ್ತರಹಳ್ಳಿ ಉಪವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ರವರ ಅಪ್ಪಣೆ ಮೇರೆಗೆ ದಿನಾಂಕ:05.02.2022 ರಂದು ಏರ್ಪಡಿಸಲಾಗಿತ್ತು ಆದರೆ ಮಾನ್ಯ ಶಾಸಕರು ಸದರಿ ದಿನಾಂಕದಂದು ಸಭೆಯನ್ನು ಏರ್ಪಡಿಸಿದ್ದರಿಂದ ಸದರಿ ಸಭೆಯನ್ನು ಮುಂದೂಡಿ **ದಿನಾಂಕ:09.02.2022** ನೇ **ಬುಧವಾರ ರಂದು ಬೆಳಿಗ್ಗೆ:11.00** ಗಂಟೆಗೆ ಕರೆಯಲಾಗಿದೆ ಹಾಗೂ ವಾರ್ಡ್ ಕಮಿಟಿಯ ಸಭೆಯನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಬೇಗೂರು ಉಪವಿಭಾಗ, ದೇವರಚಿಕ್ಕನಹಳ್ಳಿ ಮುಖ್ಯರಸ್ತೆ, ಬೇಗೂರು, ಬೆಂಗಳೂರು ರಲ್ಲಿ ನಡೆಸಲು ಏರ್ಪಡಿಸಲಾಗಿದೆ. ಆದ ಪ್ರಯುಕ್ತ ವಾರ್ಡ್ ಸಮಿತಿ ಎಲ್ಲಾ ಮಾನ್ಯ ಸದಸ್ಯರುಗಳು ಹಾಗೂ ಕೆಳಕಂಡ ಅಧಿಕಾರಿ/ನೌಕರರು ವರ್ಗದವರು ದಯವಿಟ್ಟು ಸಭೆಗೆ ತಪ್ಪದೇ ಹಾಜರಾಗಿ, ವಾರ್ಡ್ ಅಭಿವೃದ್ಧಿ ಹಾಗೂ ಕುಂದು ಕೊರತೆಗಳ ಬಗ್ಗೆ ಮುಕ್ತವಾಗಿ ಚರ್ಚಿಸಿ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ಕೋರಿದೆ. ಅಧಿಕಾರಿ/ನೌಕರರು ತಮ್ಮ ಇಲಾಖೆಗಳಿಗೆ ಸಂಬಂಧಿಸಿದ ಮಾಹಿತಿಗಳೊಂದಿಗೆ ಹಾಜರಾಗಲು ಕೋರಿದೆ.

ಸಭೆಯಲ್ಲಿ ಚರ್ಚಿಸತಕ್ಕ ವಿಷಯ: 1) ಕೋವಿಡ್-19 ಲಸಿಕೆ ಹಾಕಿಸಿಕೊಳ್ಳಲು ಜಾಗೃತಿ ಮೂಡಿಸುವುದು 2) ಕೋವಿಡ್-19 ಮಹಾಮಾರಿ ಸಾಂಕ್ರಾಮಿಕ ರೋಗ ಹರಡದಂತೆ ಮುಂಜಾಗೃತಾ ಕ್ರಮ ಕೈಗೊಳ್ಳಲು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ. 3) ವಿಪತ್ತು ನಿರ್ವಹಣೆ(Disaster Management Committee) ಸಮಿತಿ ನಿರ್ವಹಿಸುವ ಬಗ್ಗೆ. 4) ಘನತ್ಯಾಜ್ಯ ನಿರ್ವಹಣೆ ಬಗ್ಗೆ. 5) ವಾರ್ಡ್ ಕುಂದುಕೊರತೆ. 6) ಮುಂಗಾರು ಮಳೆಯಿಂದ ಸಂಭವಿಸಬಹುದಾದ ಅನಾಹುತಗಳ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ 7) BWSSB Project 8) ನೀರು ಸರಬರಾಜು ಬಗ್ಗೆ, 9)ಒಂಟಿ ಮನೆಗಳ ಫಲಾನುಭವಿಗಳ ಆಯ್ಕೆಯ ಬಗ್ಗೆ

**ಸಹಿ/-**

**ಕಾರ್ಯದರ್ಶಿ, ವಾರ್ಡ್ ಸಮಿತಿ**

**ವಾರ್ಡ್ ಸಂಖ್ಯೆ:192**

**ಪ್ರತಿಯನ್ನು:**

1. ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು, ಉತ್ತರಹಳ್ಳಿ ಉಪವಿಭಾಗ, ರವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿ, ಮಾನ್ಯ ಅಧ್ಯಕ್ಷರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಕಾರ್ಯಪಾಲಕ ಅಭಿಯಂತರರು(ಬೆಂಗಳೂರು ದಕ್ಷಿಣ ವಿಭಾಗ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೊಮ್ಮನಹಳ್ಳಿ ವಿಭಾಗ, ಘನತ್ಯಾಜ್ಯ ನಿರ್ವಹಣೆ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಅಧಿಕಾರಿಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ.
5. ವೈದ್ಯಾಧಿಕಾರಿ, ಹಿರಿಯ ಆರೋಗ್ಯ ಪರಿವೀಕ್ಷಕರು/ಕಿರಿಯ ಆರೋಗ್ಯ ಪರಿವೀಕ್ಷಕರು ಬೇಗೂರು ಉಪವಿಭಾಗ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಸಹ ಕಂದಾಯ ಅಧಿಕಾರಿ, ಬೇಗೂರು ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ/
7. ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ
8. ಪೋಲೀಸ್ ಇನ್ಸ್‌ಪೆಕ್ಟರ್ ಬೇಗೂರು/ಹುಳಿಮಾವು/ಎಲೆಕ್ಟ್ರಾನಿಕ್ ಸಿಟಿ/ ಪರಪ್ಪನ ಅಗ್ರಹಾರ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆ ಬೆಂಗಳೂರು
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೆಸ್ಕಾಂ ಇಲಾಖೆ ಬೆಂಗಳೂರು.